ಓ.ಎಸ್. ನಂ.32/2023
ಪಿಡಬ್ಲು-1

ದಿನಾಂಕ 23.11.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ವಾಟಿ ಸವಾಲುಃ ಮಾನ್ಯ ಎಜಿಪಿ ರವರಿಂದಃ**

ದಾವಾ ಸ್ವತ್ತಿನ ಉತ್ತರಕ್ಕೆ ಕಲ್ಲಪ್ಪನ ಜಮೀನು ಎಂದರೆ ನಿಜ. ದಾವಾ ಸ್ವತ್ತಿನ ಚೆಕಬಂದಿ ನನಗೆ ಗೊತ್ತಿಲ್ಲ. ದಾವಾ ಸ್ವತ್ತನ್ನು ಒತ್ತುವರಿ ಮಾಡಿದ ಬಗ್ಗೆ ನಾನು ಯಾವುದೆ ಕಂದಾಯ ದಾಖಲೆಗಳನ್ನು ಹಾಜರುಪಡಿಸಿಲ್ಲ. ದಾವಾ ಸ್ವತ್ತನ್ನು ಒತ್ತುವರಿ ಮಾಡಿದ ಬಗ್ಗೆ ಶಾಲೆಯ ಮುಖ್ಯೋಧ್ಯಾಯರಿಗೆ ತಿಳಿಸಿರುತ್ತೇನೆ. ಆದರೆ ಈ ಕುರಿತು ನಾನು ಯಾವುದೆ ದೂರು ನೀಡಿಲ್ಲ. ದಾವಾ ಸ್ವತ್ತನ್ನು ಒತ್ತುವರಿ ಮಾಡಿದ ಬಗ್ಗೆ ಸರಕಾರಕ್ಕೆ ಅರ್ಜಿ ಸಲ್ಲಿಸಿಲ್ಲ. ಪ್ರತಿವಾದಿಯರು ದಾವಾ ಸ್ವತ್ತನ್ನು ಒತ್ತುವರಿ ಮಾಡಿರುತ್ತಾರೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು 8-ವರ್ಷಗಳ ಹಿಂದೆ ಶಾಲೆಗೆ ದಾನವಾಗಿ ಜಮೀನನ್ನು ನೀಡಿರುತ್ತೇನೆ. ನಾನು ಜಮೀನನ್ನು ದಾನ ಮಾಡಿದಾಗಿನಿಂದಲೂ ನನ್ನ ಜಮೀನಿಗೆ ಹೋಗಿ ಬರುವುದು ಮಾಡುತ್ತಿದ್ದೇನೆ. 5ನೆ ಪ್ರತಿವಾದಿ ದಾವಾ ಸ್ವತ್ತನ್ನು ಒತ್ತುವರಿ ಮಾಡಿಲ್ಲ ಎಂದರೆ ಸರಿಯಲ್ಲ. ಸರಕಾರದ ವಿರುದ್ದ ದಾವೆ ಹೂಡಬೇಕಾದರೆ ಸರಕಾರದ ಮುಖ್ಯ ಕಾರ್ಯದರ್ಶಿಗಳನ್ನು ಪಕ್ಷಗಾರರನ್ನಾಗಿ ಮಾಡಬೇಕಾಗುತ್ತದೆ ಎಂದರೆ ಸರಿ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಸಂಗತಿಗಳು ಸುಳ್ಳು ಇವೆ ಎಂದರೆ ಸರಿಯಲ್ಲ. ಸರಕಾರದಿಂದ ಹಣ ಪಡೆಯುವ ಉದ್ದೇಶದಿಂದು ಸುಳ್ಳು ದೂರು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇರುವುದಿಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಸಿವಿಲ್ ನ್ಯಾಯಾಧೀಶರು
ಜೇವರ್ಗಿ